**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.**

**ಸಿ ಸಿ ಸಂಃ 3731/2021**

| | | |
|---|---|---|
| ಸಾಕ್ಷಿಯ ಹೆಸರುಃ | ಧರ್ಮರಾಜು | ಫ್ರಾಸಾಃಃ 5 |
| ತಂದೆಯ ಹೆಸರುಃ | ಅಪ್ಪಾಜಿ | ಚಾಸಾಃಃ 11 |
| ವಯಸ್ಸುಃ | 41 ವರ್ಷ | ಪ್ರಮಾಣೀಕರಿಸಿದ<br>ದಿಃ 28/05/2025 |
| ಉದ್ಯೋಗಃ | ಅಬಕಾರಿ ನಿರೀಕ್ಷಕರು,<br>ಹುಣಸೂರು ವಲಯ, ಹುಣಸೂರು | |
| ವಾಸ ಸ್ಥಳಃ | ಹುಣಸೂರು | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರಿಂದಃ**

ನಾನು ದಿಃ16/06/2021 ರಿಂದ ದಿಃ24/09/2024 ರವರೆಗೆ ಅಬಕಾರಿ ನಿರೀಕ್ಷಕನಾಗಿ ಪಿರಿಯಾಪಟ್ಟಣ ವಲಯದಲ್ಲಿ ಕರ್ತವ್ಯವನ್ನು ನಿರ್ವಹಿಸಿರುತ್ತೇನೆ.

2. ದಿಃ 02/10/2021 ರಂದು ಈ ಪ್ರಕರಣದ ಕಡತವನ್ನು ಚಾಸಾ-7 ರವರಿಂದ ಪಡೆದುಕೊಂಡು ಪರಿಶೀಲನೆ ಮಾಡಿರುತ್ತೇನೆ.

3. ದಿಃ 04/10/2021 ರಂದು ಚಾಸಾ-10 ರವರ ಮೂಲಕ ಈ ಪ್ರಕರಣದಲ್ಲಿ ಅಮಾನತ್ತು ಪಡಿಸಿಕೊಂಡ ಮದ್ಯವನ್ನು ರಾಸಾಯನಿಕ ಪರೀಕ್ಷೆಗೆ FSL ಬೆಂಗಳೂರಿಗೆ ಕಳುಹಿಸಿರುತ್ತೇನೆ. ದಿಃ01/12/2021 ರಂದು ಚಾಸಾ-10 ರವರು FSL ವರದಿಯನ್ನು ತಂದು ಹಾಜರುಪಡಿಸಿರುತ್ತಾರೆ.

4. ದಿಃ 12/10/2021 ರಂದು ಈ ಪ್ರಕರಣದಲ್ಲಿ ಅಮಾನತ್ತು ಪಡಿಸಿಕೊಂಡ ವಾಹನದ ಮಾಲೀಕತ್ವವನ್ನು ಕೋರಿ ಹುಣಸೂರಿನ ಆರ್ ಟಿ ಒ ರವರಿಗೆ ಮನವಿ ಪತ್ರವನ್ನು ಸಲ್ಲಿಸಿರುತ್ತೇನೆ. ಅವರು ದಿಃ13/10/2021 ರಂದು ಸದರಿ ವಾಹನವು ಚಾಸಾ-9 ರವರ ಹೆಸರಿನಲ್ಲಿದೆ ಎಂದು ವರದಿ ನೀಡಿರುತ್ತಾರೆ. ಅದೇ ದಿನ ಚಾಸಾ-9 ರವರಿಗೆ ಕಾರಣ ಕೇಳಿ ನೋಟೀಸು ಮತ್ತು ಪಂಚರು ಹಾಗೂ ಇಲಾಖಾ ಸಿಬ್ಬಂದಿಗಳಿಗೆ ಹೇಳಿಕೆ ನೀಡಲು ನೋಟೀಸು ನೀಡಿರುತ್ತೇನೆ.

5. ದಿಃ18/10/2021 ರಂದು ಪಂಚರ ಮತ್ತು ಸಿಬ್ಬಂದಿಗಳ ಹೇಳಿಕೆಗಳನ್ನು ಪಡೆದಿರುತ್ತೇನೆ.

6. ದಿಃ 01/12/2021 ರಂದು ಚಾಸಾ-9 ರವರು ತಮ್ಮ ಸಮಜಾಯಿಷಿಯಲ್ಲಿ ಸದರಿ ವಾಹನವು ತನಗೆ ಸೇರಿದ್ದು, ತನ್ನ ಗಂಡ ರಾಜ ಬಿನ್ ಸಕಲಾರಾಧ್ಯ ರವರು ಬಳಸುತ್ತಿದ್ದು, ಈ ಕೃತ್ಯಕ್ಕೆ ಅವರೇ ಸಂಪೂರ್ಣ ಜವಾಬ್ದಾರರು ಎಂದು ಮುಚ್ಚಳಿಕೆ ಪತ್ರ ಮತ್ತು ಹೇಳಿಕೆಯನ್ನು ನೀಡಿರುತ್ತಾರೆ.

7. ದಿಃ 05/12/2021 ರಂದು ಆರೋಪಿತ ಕಚೇರಿಗೆ ಹಾಜರಾಗಿ ತನ್ನ ಸ್ವ ಇಚ್ಛಾ ಹೇಳಿಕೆಯನ್ನು ನೀಡಿರುತ್ತಾರೆ. ಅದೇ ದಿನ ತನಿಖೆ ಪೂರೈಸಿ ಆರೋಪಿತನ ವಿರುದ್ಧ ಮೇಲ್ನೋಟಕ್ಕೆ ಆರೋಪ ಸಾಬೀತಾದ ಕಾರಣ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

8. ಸಾಕ್ಷಿಯು FSL ಗೆ ನೀಡಿದ ಮನವಿ ಪತ್ರದಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.9** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.9(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ಆರ್ ಟಿ ಒ ರವರಿಗೆ ನೀಡಿದ ಮನವಿ ಪತ್ರದಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.10** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.10(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ವಾಹನದ ಬಿ ಎಕ್ಸ್ ಟ್ರ್ಯಾಕ್ಟ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.11** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.11(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ಚಾಸಾ-9 ರವರಿಗೆ ನೀಡಿದ ಕಾರಣ ಕೇಳಿ ನೋಟೀಸಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.12** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.12(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ಚಾಸಾ-9 ರವರು ನೀಡಿದ ಸಮಜಾಯಿಷಿಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.13** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.13(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ಚಾಸಾ-9 ರವರ ಮುಚ್ಚಳಿಕೆ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.14** ಎಂದು ಗುರುತಿಸಲಾಯಿತು. ಆರೋಪಿತ ಈ ದಿನ ನ್ಯಾಯಾಲಯದ ಮುಂದೆ ಹಾಜರಿದ್ದಾರೆ.

**<u>ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಸಿಜಿ ವಕೀಲರಿಂದಃ</u>**

5. ನಾನು ಮುಂದಿನ ತನಿಖೆಗಾಗಿ ಚಾಸಾ-7 ರವರಿಂದ ಕಡತವನ್ನು ಸ್ವೀಕರಿಸಿಲ್ಲ ಎಂದರೆ ಸರಿಯಲ್ಲ. ಮುದ್ದೇಮಾಲುಗಳಿಗೂ ಆರೋಪಿತನಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಯಾವುದೇ FSL ವರದಿಯನ್ನು ಸ್ವೀಕರಿಸಿಲ್ಲ ಎಂದರೆ ಸರಿಯಲ್ಲ. ವಾಹನದ ಮಾಲೀಕತ್ವವನ್ನು ಕೋರಿ ಅರ್ಜಿ ಸಲ್ಲಿಸಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ವಾಹನವನ್ನು ನೋಡಿಲ್ಲ ಎಂದರೆ ಸರಿಯಲ್ಲ. ವಾಹನ ಯಾವ ಬಣ್ಣದ್ದು ಎಂದು ನೆನಪಿಲ್ಲ. ವಾಹನದ ಪೋಟೋವನ್ನು ಹಾಜರುಪಡಿಸಿದ್ದೇನೆ. ಪೋಟೋದ ಸಿ.ಡಿಯನ್ನು ಹಾಜರುಪಡಿಸಿಲ್ಲ. ವಾಹನದ ಪೋಟೋ ಈ ಪ್ರಕರಣಕ್ಕೆ ಸಂಬಂಧಿಸಿದ್ದಲ್ಲ ಎಂದರೆ ಸರಿಯಲ್ಲ. ಪೋಟೋವಿನ ನಕಲನ್ನು ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ಚಾಸಾ-9 ರವರಿಗೆ ಯಾವುದೇ ನೋಟೀಸು ನೀಡಿಲ್ಲ ಮತ್ತು ಹೇಳಿಕೆ ಮತ್ತು ಮುಚ್ಚಳಿಕೆ ಪತ್ರ ಸ್ವೀಕರಿಸಿಲ್ಲ ಎಂದರೆ ಸರಿಯಲ್ಲ. ಮುಚ್ಚಳಿಕೆ ಪತ್ರವನ್ನು ಸೃಷ್ಟಿಸಿದ್ದೇನೆ ಎಂದರೆ ಸರಿಯಲ್ಲ. ಪಂಚರಿಂದ ಮತ್ತು ಸಿಬ್ಬಂದಿಗಳ ಹಾಗೂ ಆರೋಪಿತನ ಹೇಳಿಕೆಯನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ತನಿಖೆಯನನ್ನೂ ಮಾಡದಿದ್ದರೂ ಮೇಲಾಧಿಕಾರಿಗಳ ಮಾತು ಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅಂಕಿಅಂಶಕ್ಕೋಸ್ಕರ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದ ಎಲ್ಲಾ ಅಂಶಗಳು ಸುಳ್ಳು ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

**<u>ತೆರದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು</u>**

**<u>ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.</u>**

**ಹೆಃಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.**

**ಪಿರಿಯಾಪಟ್ಟಣ.**